# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ತುಮಕೂರು ತಾಲ್ಲೂಕ್ ಹಿರೇಹಳ್ಳಿ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಹೆಚ್.ಎನ್.ನಾಗಭೂಷಣ ರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-1635/2016/ಎಆರ್‌ಎಲ್‌ಓ1, ದಿನಾಂಕ: 06-04-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಡಿ-1635/2016/ಸನಿಕಾಸ-1, ದಿನಾಂಕ: 08-03-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 06-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ, ತುಮಕೂರು ತಾಲ್ಲೂಕು, ಹಿರೇಹಳ್ಳಿ ಗ್ರಾಮ ಪಂಚಾಯತ್ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಹೆಚ್.ಎನ್.ನಾಗಭೂಷಣ ಮತ್ತು 2) ಅಧ್ಯಕ್ಷರಾಗಿದ್ದ ಶ್ರೀಮತಿ.ಹೆಚ್.ಕೆ.ಮಂಜಮ್ಮ (ಇನ್ನು ಮುಂದೆ "1 ಮತ್ತು 2ನೇ ಎದುರುದಾರ" ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರು ದೂರುದಾರರಾದ ಶ್ರೀ.ಎಂ.ಆರ್.ಗೌತಮ್ ಆರಕ್ಷಕ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ತುಮಕೂರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ರವರು ದಾಳಿ ಮಾಡಿದಾಗ, ದುರ್ನಡತೆ ತೋರಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 7(2) ರನ್ವಯ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

**ದೂರಿನ ಸಂಕ್ಷಿಪ್ತ ವಿವರಣೆ:**

**ಅ)** ಎದುರುದಾರರು ತುಮಕೂರು ತಾಲ್ಲೂಕು ಹಿರೇಹಳ್ಳಿ ಗ್ರಾಮ ಪಂಚಾಯತಿಗೆ 2013-14ನೇ ಸಾಲಿಗೆ 20141-15ನೇ ಸಾಲಿನ 13ನೇ ಹಣಕಾಸು ಯೋಜನೆಯಡಿಲ್ಲಿ ಬಿಡುಗಡೆ ಮಾಡಿರುವ ಹಣವನ್ನು ನಿಯಮಾನುಸಾರ ಅನುಸರಿಸದೇ ವಸ್ತುಗಳನ್ನು ಖರೀದಿ ಮಾಡುವಲ್ಲಿ ಅವ್ಯವಹಾರ ಮಾಡಿ, ಕಾಮಗಾರಿಗೆ ಮಂಜೂರಿಯಾದ ರೂ. 58,22,846/-ಗಳ ಹಣವನ್ನು ದುರುಪಯೋಗ ಪಡಿಸಿಕೊಂಡು ಕರ್ತವ್ಯ ಲೋಪ ಎಸಗಿದ್ದಾರೆ;

**ಆ)** ತುಮಕೂರು ತಾಲ್ಲೂಕಿನ ಹಲವು ಗ್ರಾಮ ಪಂಚಾಯತಿಯಲ್ಲಿ ಅಕ್ರಮ ಹಣ ಶೇಖರಣೆ, ದಾಖಲಾತಿಗಳ ತಿದ್ದುವಿಕೆ, ಅಕ್ರಮ ಖಾತೆ ಮಾಡುವ ಬಗ್ಗೆ ಮತ್ತು ನಕಲಿ ಬಿಲ್ಲುಗಳನ್ನು ಸೃಷ್ಟಿಸುವ ಖಚಿತ ಮಾಹಿತಿಯ ಮೇರೆಗೆ ಎದುರುದಾರರ ಕಛೇರಿಯ ಮೇಲೆ ದಾಳಿ ಮಾಡಿ ಪರಿಶೀಲಿಸಲು ಪೋಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ತುಮಕೂರು ರವರು ಸ್ವಯಂ ಪ್ರೇರಣೆಯಿಂದ ಠಾಣಾ ಮೊಕದ್ದಮೆ ಸಂ:21/2014ರಂತೆ ಪಿಸಿ ಕಾಯಿದೆ, ಕಲಂ 1988 ಕಲಂ 13(1)ಸಿ ಸಹ ಕಲಂ 13(2) ಹಾಗೂ 406, 409 ಐಪಿಸಿ ರಂತೆ ಪ್ರಕರಣವನ್ನು ದಾಖಲಿಸಿಕೊಂಡು ದಾಳಿ ಮಾಡಿದ್ದು, ಎದರುದಾರರು ಮಾಡಿದ ಅವ್ಯವಹಾರವು ಕಂಡು ಬಂದಿದೆ;

**ಇ)** ಅದೇ ದಿನ, ಎದುರುದಾರರಿಂದ ವಿವಿಧ ಕಛೇರಿಯ ದಾಖಲಾತಿಗಳನ್ನು ಜಪ್ತು ಮಾಡಿಕೊಂಡು ಪರಿಶೀಲನೆ ಮಾಡಲಾಗಿ, ದಾಖಲೆಗಳಲ್ಲಿ ಬರೆಯದೇ, ಸಹಿ ಮಾಡದೇ ಚೆಕ್ ಪುಸ್ತಕಗಳನ್ನು ಬರೆದು ಒಡೆದು ಹಾಕಿದ್ದು (ಕ್ಯಾನಸಲ್)ಕಂಡು ಬಂದಿದೆ;

**ಈ)** ಸದರಿ ದಾಖಲೆಗಳನ್ನು ಎದುರುದಾರರಿಂದ ಪಂಚನಾಮೆ ಮೂಲಕ ತನಿಖಾಧಿಕಾರಿಯು ವಶಪಡಿಸಿಕೊಂಡಿದ್ದಾರೆ;

**ಉ)** ಕಛೇರಿಯಲ್ಲಿ ಜಪ್ತು ಮಾಡಲಾದ ದಾಖಲೆಗಳ ಬಗ್ಗೆ ತನಿಖಾಧಿಕಾರಿ ಎದುರುದಾರರನ್ನು ವಿಚಾರಿಸಲಾಗಿ ಎದುರುದಾರರುಗಳು ಯಾವುದೇ ಸಮಂಜಸವಾದ ಉತ್ತರ ಅಥವಾ ವಿವರಣೆ ಅಥವಾ ಲೆಕ್ಕ ನೀಡಿಲ್ಲ;

**ಊ)** ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿದೆ.

ಮೇಲೆ ಹೇಳಿದ ಕಾರಣಕ್ಕಾಗಿ ಎದುರುದಾರರ ಮೇಲೆ ಶಿಸ್ತು ಕ್ರಮಕ್ಕಾಗಿ ಇಲಾಖಾ ವಿಚಾರಣೆ ನಡೆಸಲು ಸಂಬಂಧಪಟ್ಟ ಪ್ರಾಧಿಕಾರಕ್ಕೆ ಏಕೆ ಶಿಫರಸ್ಸು ಮಾಡಬಾರದೆನ್ನುವ ಬಗ್ಗೆ ಎದುರುದಾರರುಗಳಿಂದ ಕಾರಣ ಪಡೆಯಲು ಪರಿವೀಕ್ಷಣಾ ಟಿಪ್ಪಣಿಯನ್ನು ಎದುರುದಾರರುಗಳಿಗೆ ಕಳುಹಿಸಲಾಗಿ, ಎದುರುದಾರರುಗಳು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಉತ್ತರವನ್ನು ಸಲ್ಲಿಸಿದ್ದಾರೆ. ಆದರೆ, 1ನೇ ಎದುರುದಾರರು ನೀಡಿರುವ ಉತ್ತರದಲ್ಲಿ, ಅವರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಗೂ ದಾಖಲಾತಿಗಳಿಂದ, 1ನೇ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಟತೆ ಮತ್ತು ಸರ್ಕರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಎರಡನೇ 2(ನೇ) ಎದುರುದಾರರು ಮಾಜಿ ಗ್ರಾಮ ಪಂಚಯತ್ ಅಧ್ಯಕ್ಷರಾಗಿರುವುದರಿಂದ, ಸದರಿಯವರ ವಿರುದ್ಧದ ನಡವಳಿಯನ್ನು ಕೈಬಿಡಲಾಗಿದೆ.

ಅದಲ್ಲದೆ 1ನೇ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವತನೆ ಕಂಡು ಬಂದಿರುವುದರಿಂದ, ಸದರಿಯವರ ವಿರುಧ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ 1ನೇ ಎದುರುದಾರರ ವಿರುಧ್ಧದ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕಣ, ನಿಯಂತ್ರಣ ಮತ್ತು ಮೆಲ್ಮನವಿ) ನಿಯಮಾವಳಿ 1957 ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

ಶ್ರೀ ಹೆಚ್.ಎನ್.ನಾಗಭೂಷಣ, ಹಿರೇಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/314/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 03–05–2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹೆಚ್.ಎನ್.ನಾಗಭೂಷಣ ಹಿರೇಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 290 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.

5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ.

6) ಶ್ರೀ ಹೆಚ್.ಎನ್.ನಾಗಭೂಷಣ ಹಿರೇಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ, ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ

7) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.